O.S. 367/2013 PW-1

ದಿನಾಂಕಃ 10.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ದಾವಾ ಆಸ್ತಿಯ ಕಂದಾಯ ದಾಖಲೆಯನ್ನು 1967 ರಿಂದ 2013ರ ತನಕ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. 2013-14ರ ಪಹಣಿಗಳನ್ನು ಹೊರತುಪಡಿಸಿ ಬೇರೆ ಪಹಣಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿ ಉತ್ತರಿಸದೆ ಸುಮ್ಮನೆ ನಿಂತಿರುತ್ತಾರೆ. ನಾನು ತಹಶೀಲ್ದಾರ್ ಕಛೇರಿಯಿಂದ ನೀಡಿದ ಜನನ ಪ್ರಮಾಣ ಪತ್ರವನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಶಾಲಾ ದಾಖಲಾತಿಯನ್ನು ಹಾಜರುಪಡಿಸಿದ್ದೇನೆ ಎಂದು ನುಡಿಯುತ್ತಾರೆ. ನನ್ನ ಜನನ ಪ್ರಮಾಣ ಪತ್ರವನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ನನ್ನ ಜನನ ಪ್ರಮಾಣ ಪತ್ರವನ್ನು ದಾವೆ ಸಲ್ಲಿಸಿದ ಸಂದರ್ಭ ಹಾಜರುಪಡಿಸಿರುವ ಬಗ್ಗೆ ನನಗೆ ಗೊತ್ತಿಲ್ಲ. ಪ್ರತಿವಾದಿಗಳು ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನಾನು ತಿಳಿದುಕೊಂಡಿರುತ್ತೇನೆ. ನಿಪಿ-1ರಂತೆ 4ನೇ ಪ್ರತಿವಾದಿಗೆ ಮಾರಾಟ ಮಾಡಿರುವ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ-1ರಂತೆ ನಮ್ಮ ತಂದೆ ಮತ್ತು ನಮ್ಮ ಚಿಕ್ಕಪ್ಪನವರು ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಮಾರಾಟ ಮಾಡಿರುವುದು ಗೊತ್ತಿದ್ದರು ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1ರಂತೆ ಪ್ರತಿವಾದಿಗಳು ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ.

**ಪ್ರತಿವಾದಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಪ್ರಕರಣವನ್ನು ಮುಂದುವರೆದ ಪಾಟೀ ಸವಾಲಿಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಶಿರಾ.